# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1785 |
| ಸದಸ್ಯರ ಹೆಸರು | : | ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 19-03-2021. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ, ಜಿಲ್ಲಾ ಪಂಚಾಯಿತಿಯಿಂದ ಅನುಮೋದನೆಗೊಂಡ ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕರವಸೂಲಿಗಾರ/ಗುಮಾಸ್ತರ ಹುದ್ದೆಗಳೆಷ್ಟು; | ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ, ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಿಂದ ಅನುಮೋದನೆಗೊಂಡು ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕರವಸೂಲಿಗಾರ/ಗುಮಾಸ್ತರ ಹುದ್ದೆಗಳು 157. |
| (ಆ) | ಈ ಹುದ್ದೆಗಳಲ್ಲಿ ಸುಮಾರು 20-25 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ನೌಕರರುಗಳಿಗೆ ಮುಂಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಇ) | ಬಂದಿದ್ದಲ್ಲಿ, ಸದರಿ ನೌಕರರುಗಳಿಗೆ ಮುಂಬಡ್ತಿ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 20 ವರ್ಷಕ್ಕೂ ಹೆಚ್ಚು ಕಾಲದಿಂದ ಕರವಸೂಲಿಗಾರ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 8 ನೌಕರರುಗಳು ಆಯ್ಕೆ ಮೂಲಕ ನೇರ ನೇಮಕಾತಿ ಹೊಂದಿರುವುದಿಲ್ಲ. ಸದರಿ ನೌಕರರು ಎಸ್.ಎಸ್.ಎಲ್.ಸಿ.ಯಲ್ಲಿ ಉತ್ತೀರ್ಣತೆ ಹೊಂದಿದ್ದು, ವೃಂದ ಮತ್ತು ನೇಮಕಾತಿ ನಿಯಮಗಳಂತೆ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ಹುದ್ದೆಗೆ ಆಯ್ಕೆ ಮೂಲಕ ನೇರ ನೇಮಕಾತಿ ಹೊಂದಲು ಅರ್ಹರಾಗಿದ್ದು, ಇತ್ತೀಚಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ 4 ಗ್ರಾಮ ಪಂಚಾಯತಿಗಳು ಪಟ್ಟಣ ಪಂಚಾಯತಿ / ಪುರಸಭೆಯಾಗಿ ಪರಿವರ್ತನೆಯಾದ ಕಾರಣ ಹಾಗೂ ಜಿಲ್ಲೆಯಲ್ಲಿ ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ ವೃಂದದ ಆಯ್ಕೆ ಮೂಲಕ ನೇರ ನೇಮಕಾತಿ ಕೋಟಾದ ಹುದ್ದೆಗಳು ಖಾಲಿ ಇಲ್ಲದ ಕಾರಣ ಕರವಸೂಲಿಗಾರ ವೃಂದದಿಂದ ಆಯ್ಕೆ ಮೂಲಕ ನೇರ ನೇಮಕಾತಿ ಮಾಡಲು ಸಾಧ್ಯವಾಗಿರುವುದಿಲ್ಲ. |

| | | |
|---|---|---|
| | | ಪ್ರಸ್ತುತ ಆರ್ಥಿಕ ಇಲಾಖೆಯು ಸುತ್ತೋಲೆ ಸಂಖ್ಯೆ:ಆಇ:03:ಬಿಇಎಂ:2020 ದಿನಾಂಕ: 06-07-2020 ರಲ್ಲಿ ಕೋವಿಡ್-19 ನಿಂದಾಗಿ ಉಂಟಾಗಿರುವ ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸುವ ನಿಟ್ಟಿನಲ್ಲಿ 2020-21 ನೇ ಸಾಲಿನಲ್ಲಿ ಯಾವುದೇ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ತಡೆಹಿಡಿಯುವಂತೆ ನಿರ್ದೇಶನ ನೀಡಿರುವುದರಿಂದ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗೆ ನೇಮಕಾತಿ ಮಾಡುವುದನ್ನು ತಡೆಹಿಡಿಯಲಾಗಿದೆ.<br><br>ಮುಂದೆ ಆರ್ಥಿಕ ಇಲಾಖೆಯು ಹೊರಡಿಸುವ ಆದೇಶದಂತೆ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ ಹುದ್ದೆಗಳನ್ನು ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಗ್ರಾಮ ಪಂಚಾಯತಿ ನೌಕರರಿಂದ ಆಯ್ಕೆ ಮೂಲಕ ನೇರ ನೇಮಕಾತಿ ಮಾಡಲು ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲು ಕ್ರಮ ವಹಿಸಲಾಗುವುದು. |
| (ಈ) | ನಿವೃತ್ತಿ ಅಂಚಿನಲ್ಲಿರುವ ನೌಕರರುಗಳಿಗೆ ಯಾವ ಕಾಲಮಿತಿಯಲ್ಲಿ ಮುಂಬಡ್ತಿ ನೀಡಲಾಗುವುದು? (ವಿವರ ಒದಗಿಸುವುದು) | ಕಾಲಮಿತಿ ನಿಗಧಿಪಡಿಸಿರುವುದಿಲ್ಲ. |

ಸಂ. ಗ್ರಾಅಪ 143 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು